I/212643/2022

ಕರ್ನಾಟಕ ಸರ್ಕಾರ

ಸಂಖ್ಯೆ:ಗ್ರಾಅಪ: 42(25)-3-3:
ಆರ್‌ಆರ್‌ಸಿ:2021 (ಇ-531054)

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ, ಬೆಂಗಳೂರು,
ದಿನಾಂಕ: 27.01.2022

**ತಿದ್ದುಪಡಿ ಆದೇಶ**

**ವಿಷಯ:** 2021-22ನೇ ಸಾಲಿಗೆ ಮಾನ್ಯ ಮುಖ್ಯಮಂತ್ರಿಗಳ ವಿಶೇಷ ಮಂಜೂರಾತಿ ಕಾರ್ಯಕ್ರಮಗಳಡಿ ಶಿವಮೊಗ್ಗ ಜಿಲ್ಲೆಯ ಭದ್ರಾವತಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ರಸ್ತೆ ಮತ್ತು ಸೇತುವೆ ಕಾಮಗಾರಿಗಳನ್ನು ಅಭಿವೃದ್ಧಿ ಪಡಿಸುವ ಕಾಮಗಾರಿಯನ್ನು ಬದಲಾವಣೆ ಮಾಡುವ ಕುರಿತು.

**ಉಲ್ಲೇಖ:**
1. ಸರ್ಕಾರದ ಆದೇಶ ಸಂ: ಗ್ರಾಅಪ 42 (25) -3 ಆರ್‌ಆರ್‌ಸಿ 2021, ದಿನಾಂಕ: 29.09.2021
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಶಿವಮೊಗ್ಗ ಜಿ.ಪಂ.ರವರ ಪತ್ರ ಸಂ: ಜಿಪಂಶಿ/ಅಭಿ(6)/ಸಿ.ಎಂ.ವಿಶೇಷ ಕಾರ್ಯಕ್ರಮ/ವಿವ-09/2021-22, ದಿನಾಂಕ: 31.12.2021

********

ಓದಲಾದ-1 ರ ಆದೇಶದಲ್ಲಿ 2021-22ನೇ ಸಾಲಿಗೆ ಮಾನ್ಯ ಮುಖ್ಯಮಂತ್ರಿಗಳ ವಿಶೇಷ ಮಂಜೂರಾತಿ ಕಾರ್ಯಕ್ರಮದಡಿ ಲೆ.ಶೀ. 5054 ರಡಿ ಶಿವಮೊಗ್ಗ ಜಿಲ್ಲೆಯ ಭದ್ರಾವತಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ 9 ರಸ್ತೆ ಕಾಮಗಾರಿಗಳನ್ನು ರೂ. 5.00 ಕೋಟಿಗಳ ಮೊತ್ತದಲ್ಲಿ ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯಿಂದ ಅನುಷ್ಠಾನ ಮಾಡಲು ಆದೇಶ ಹೊರಡಿಸಲಾಗಿರುತ್ತದೆ.

ಓದಲಾದ -2 ರ ಪತ್ರದಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಶಿವಮೊಗ್ಗ ರವರು ಆದೇಶ ಹೊರಡಿಸಲಾಗಿದ್ದ 9 ರಸ್ತೆ ಕಾಮಗಾರಿಗಳ ಪೈಕಿ 1 ಕಾಮಗಾರಿಯನ್ನು ಕೆಳಕಂಡಂತೆ ಬದಲಾವಣೆ ಮಾಡಲು ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

| ಕ್ರ ಸಂ. | ಅನುಮೋದನೆಗೆ ಸಲ್ಲಿಸಿರುವ ಕಾಮಗಾರಿಯ ಹೆಸರು | ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ) | ಬದಲಾವಣೆಗೆ ಕೋರಿರುವ ಕಾಮಗಾರಿಯ ಹೆಸರು | ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ) |
|---|---|---|---|---|
| 01 | ಭದ್ರಾವತಿ ತಾ: ಕಾರೇಹಳ್ಳಿ ಗ್ರಾ.ಪಂ. ಬೊಮ್ಮನಹಳ್ಳಿ ಗ್ರಾಮದಿಂದ ಎಂ.ಸಿ. ಹಳ್ಳಿಗೆ ಹೋಗುವ ರಸ್ತೆಯಲ್ಲಿ ಸೇತುವೆ ನಿರ್ಮಾಣ ಕಾಮಗಾರಿ | 60.00 | ಭದ್ರಾವತಿ ತಾ: ಅರಳಿಕೊಪ್ಪ ಗ್ರಾ.ಪಂ. ಹೊಳೆಗಂಗೂರಿನಿಂದ ಗೊಂದಿ ಅಣೆಕಟ್ಟೆಗೆ ಹೋಗುವ ರಸ್ತೆ ಅಭಿವೃದ್ಧಿ ಕಾಮಗಾರಿ (2 ಕಿ.ಮೀ) | 60.00 |
| ಒಟ್ಟು | | **60.00** | ಒಟ್ಟು | **60.00** |

ಮೇಲೆ ತಿಳಿಸಿರುವಂತೆ ರಸ್ತೆ ಕಾಮಗಾರಿಯನ್ನು ಕೆಳಕಂಡ ಷರತ್ತಿಗೊಳಪಟ್ಟು ಬದಲಾವಣೆ ಮಾಡಲು ಸರ್ಕಾರವು ಅನುಮೋದಿಸಿದೆ. ಉಳಿದಂತೆ ಈ ಹಿಂದೆ ಹೊರಡಿಸಿರುವ ಆದೇಶದಲ್ಲಿ ಯಾವುದೇ ಬದಲಾವಣೆಯಿರುವುದಿಲ್ಲ.

**ಷರತ್ತುಗಳು:**

1. ಓದಲಾದ-1 ರ ಆದೇಶದಲ್ಲಿ ಈಗಾಗಲೇ ಮಂಜೂರಾತಿ ನೀಡಿದ ರಸ್ತೆ ಕಾಮಗಾರಿಗಳು

ಆರಂಭಗೊಳ್ಳದಿರುವುದನ್ನು ಖಚಿತಪಡಿಸಿಕೊಳ್ಳತಕ್ಕದ್ದು, ಒಂದೊಮ್ಮೆ ಕಾಮಗಾರಿಗಳು ಆರಂಭಿಸತಕ್ಕದ್ದಲ್ಲ.

2. ಹೊಸದಾಗಿ ಬದಲಾವಣೆಯ ಮಂಜೂರಾತಿಗೆ ಕೋರಿರುವ ರಸ್ತೆ ಕಾಮಗಾರಿಯು ಡಿಆರ್‌ಆರ್‌ಪಿ ಪಟ್ಟಿಯಲ್ಲಿರತಕ್ಕದ್ದು.
3. ಈ ಕಾಮಗಾರಿಗಳು ಇನ್ನಾವುದೇ ಯೋಜನೆಯಲ್ಲಿ ಅಭಿವೃದ್ಧಿ ತೆಗೆದುಕೊಂಡಿರಬಾರದು ಮತ್ತು ಪುನರಾವರ್ತನೆಯಾಗಿರತಕ್ಕದ್ದಲ್ಲ. ಕಾಮಗಾರಿಗಳ ಪುನರಾವರ್ತನೆಯಲ್ಲಿ ವ್ಯತ್ಯಾಸವಿದ್ದತರ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳೇ ಜವಾಬ್ದಾರಿಯಾಗುತ್ತಾರೆ.
4. ಮತ್ತೆ ಮತ್ತೆ ಬದಲಾವಣೆಗೆ ಪ್ರಸ್ತಾವನೆಯನ್ನು ಸಲ್ಲಿಸತಕ್ಕದ್ದಲ್ಲ ಎಂಬ ಷರತ್ತುಗಳನ್ನು ವಿಧಿಸಿ ಅನುಮೋದಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

Signed by Ramesh .d.o
Date: 27-01-2022 13:35:10

27/01/2022

(ರಮೇಶ್ ಡಿ.ಓ)
ಉಪ ನಿರ್ದೇಶಕರು, ಗ್ರಾಮೀಣಾಭಿವೃದ್ಧಿ
ಹಾಗೂ ಪದನಿಮಿತ್ತ ಸರ್ಕಾರದ ಅಧೀನ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

**ಪ್ರತಿಯನ್ನು:**

1. ಮಹಾಲೇಖಪಾಲರು (ಲೆಕ್ಕ ಪತ್ರ), ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಆಡಿಟ್-1), ಕರ್ನಾಟಕ , ಬೆಂಗಳೂರು.
3. ಮಹಾಲೇಖಪಾಲರು (ಆಡಿಟ್-2), ಕರ್ನಾಟಕ, ಬೆಂಗಳೂರು.
4. ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.
5. ಅಪರ ಮುಖ್ಯ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
6. ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (PMU) (IF), 5ನೇ ಹಂತ, ಬಹುಮಹಡಿಗಳ ಕಟ್ಟಡಮ ಬೆಂಗಳೂರು.
7. ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
8. ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
9. ವಿಶೇಷಾಧಿಕಾರಿಗಳು (ಜಿಪಂ) ಮತ್ತು ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
10. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
11. ನಿರ್ದೇಶಕರು,ಖಜಾನೆ ಇಲಾಖೆ, ಬೆಂಗಳೂರು.
12. ಉಪ ನಿರ್ದೇಶಕರು, ನೆಟ್ ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್ , ಟ್ರೆಜರಿ ಡಿಪಾರ್ಟ್ ಮೆಂಟ್, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
13. ಅಧೀನ ಕಾರ್ಯದರ್ಶಿಗಳು (ವೆಚ್ಚ-6), ಜಿ.ಪಂ. ಆರ್ಥಿಕ ಇಲಾಖೆ , ವಿಧಾನಸೌಧ, ಬೆಂಗಳೂರು.
14. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಗ್ರಾಮೀಣಾಭಿವೃದ್ಧಿ ಭವನ, ಆನಂದರಾವ್ ವೃತ್ತ, ಬೆಂಗಳೂರು
15. ವ್ಯವಸ್ಥಾಪಕ ನಿರ್ದೇಶಕರು, ಕೆಆರ್‌ಐಡಿಎಲ್, ಬೆಂಗಳೂರು
16. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಶಿವಮೊಗ್ಗ ಜಿಲ್ಲಾ ಪಂಚಾಯತಿ.
17. ಮಾಹಿತಿ ಕೇಂದ್ರದ ಗಣಕ ಕೋಶ ಮುಖ್ಯಸ್ಥರು, ಗ್ರಾಅಪಂರಾ ಇಲಾಖೆ ಇವರಿಗೆ ಇಲಾಖೆಯ ವೆಬ್‌ಸೈಟ್‌ನಲ್ಲಿ ಅಳವಡಿಸಲು
18. ಅಂತರ್ಜಾಲದಲ್ಲಿ ಅಳವಡಿಸಲು ಹಾಗೂ ಗ್ರೂಪ್ ಮೈಲ್ ನಲ್ಲಿ ರವಾನಿಸಲು ಸೂಚಿಸಿದೆ.
19. ರಕ್ಷಾ ಕಡತ/ ಹೆಚ್ಚುವರಿ ಪ್ರತಿ